## ಕರ್ನಾಟಕಸರ್ಕಾರದನಡವಳಿಗಳು

ವಿಷಯ: ಭಾರತ ಸರ್ಕಾರದ ನಾಗರೀಕ ಹುದ್ದೆಗಳು ಮತ್ತು ಸೇವೆಗಳಲ್ಲಿ ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶಕ್ಕಾಗಿ ಆರ್ಥಿಕವಾಗಿ ದುರ್ಬಲ ವರ್ಗಗಳ ಮೀಸಲಾತಿ ಸೌಲಭ್ಯ ಪಡೆಯಲು ಅರ್ಹ ಅಭ್ಯರ್ಥಿ/ವಿದ್ಯಾರ್ಥಿಗಳಿಗೆ **'ಆದಾಯ ಮತ್ತು ಸ್ವತ್ತು ಪ್ರಮಾಣ ಪತ್ರ'** ಒದಗಿಸುವ ಕುರಿತು ಹೊರಡಿಸಲಾಗಿದ್ದ ಆದೇಶವನ್ನು ಹಿಂಪಡೆದು ಮರು ಆದೇಶ ಹೊರಡಿಸುವ ಬಗ್ಗೆ.

ಓದಲಾಗಿದೆ:

1. ಭಾರತ ಸರ್ಕಾರದ ಅಧಿಸೂಚನೆ ಸಂಖ್ಯೆ:PAUSHA22, 1940 (SAKA), Dated:12.01.2019.
2. ಭಾರತ ಸರ್ಕಾರದ ಸಿಬ್ಬಂದಿ, ಕುಂದು ಕೊರತೆ ಮತ್ತು ಪಿಂಚಣಿ ಮಂತ್ರಾಲಯದ ಅಧಿಕೃತ ಜ್ಞಾಪನ ಸಂಖ್ಯೆ:F.No.36039/1/2019-Estt. (Res.) Dated:19.01.2019 ಮತ್ತು ದಿನಾಂಕ:31.01.2019
3. ಸರ್ಕಾರಿ ಆದೇಶ ಸಂಖ್ಯೆ:ಹಿಂವಕ 75 ಬಿಸಿಎ 2019, ಬೆಂಗಳೂರು, ದಿನಾಂಕ:14.05.2019.
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆ:ಹಿಂವಕ:ಮಾಶಾ/ಸಿಆರ್-70/2018-19, ದಿ:25/03/2021.

* * * * * * * *

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ. (1)ರ ಅಧಿಸೂಚನೆಯಲ್ಲಿ ಭಾರತ ಸಂವಿಧಾನ (ಒಂದು ನೂರ ಮೂರನೇ ತಿದ್ದುಪಡಿ) ಕಾಯ್ದೆ, 2019ರನ್ವಯ ಅನುಚ್ಛೇದ 15(6)ರಲ್ಲಿ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಮತ್ತು 16(6)ರಲ್ಲಿ ನಾಗರಿಕ ಹುದ್ದೆಗಳಲ್ಲಿಆರ್ಥಿಕವಾಗಿ ದುರ್ಬಲ ವರ್ಗಗಳಿಗೆ ಗರಿಷ್ಟ ಶೇ.10ರಷ್ಟು ಮೀಸಲಾತಿ ಒದಗಿಸಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ. (2)ರ ಅಧಿಕೃತ ಜ್ಞಾಪನದಲ್ಲಿ ಭಾರತ ಸರ್ಕಾರದ ನಾಗರೀಕ ಹುದ್ದೆಗಳು ಮತ್ತು ಸೇವೆಗಳಲ್ಲಿ ನೇರ ನೇಮಕಾತಿ ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶಕ್ಕಾಗಿ ಆರ್ಥಿಕವಾಗಿ ದುರ್ಬಲ ವರ್ಗಗಳಿಗೆ(EWSs) ಶೇ.10ರಷ್ಟು ಮೀಸಲಾತಿಯನ್ನು ದಿನಾಂಕ:01.02.2019ರಿಂದ ಅನ್ವಯವಾಗುವಂತೆ ಅವಕಾಶ ಕಲ್ಪಿಸಿ ಆದೇಶಿಸಲಾಗಿದೆ ಹಾಗೂ ಸದರಿ ಮೀಸಲಾತಿಯನ್ನು ಪಡೆಯಲು ಭಾರತ ಸರ್ಕಾರವು ದಿನಾಂಕ:31.01.2019ರಂದು ಹೊರಡಿಸಿರುವ ಅಧಿಕೃತ ಜ್ಞಾಪನದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳ (ಕೇಂದ್ರ ಸರ್ಕಾರದ, ಕರ್ನಾಟಕಕ್ಕೆ ಸಂಬಂಧಿಸಿದ ಜಾತಿ ಪಟ್ಟಿಯಲ್ಲಿ ಇರುವಂತೆ) ಜಾತಿಗಳನ್ನು ಹೊರತುಪಡಿಸಿ, ಯಾವುದೇ ಕುಟುಂಬದ ವಾರ್ಷಿಕ ಆದಾಯ ರೂ.8.00ಲಕ್ಷಕ್ಕಿಂತ ಕಡಿಮೆ ಇರುವ ವ್ಯಕ್ತಿಯು ಆರ್ಥಿಕವಾಗಿ ದುರ್ಬಲ ವರ್ಗಗಳ ಮೀಸಲಾತಿಯನ್ನು ಪಡೆಯಲು ಅರ್ಹರಾಗಿರುತ್ತಾರೆ ಹಾಗೂ ಅಭ್ಯರ್ಥಿಯ ಕುಟುಂಬದ ಆದಾಯವನ್ನು ಲೆಕ್ಕಕ್ಕೆ ತೆಗೆದುಕೊಳ್ಳದೇ, ಈ ಕೆಳಕಂಡ

ಸ್ವತ್ತುಗಳನ್ನು ಹೊಂದಿರುವ ಕುಟುಂಬದ ವ್ಯಕ್ತಿಯು ಸದರಿ ಮೀಸಲಾತಿ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ.

1. 5 acres of Agricultural Land and above;
2. Residential flat of 1000sq. ft and above;
3. Residential plot of 100sq. yards and above in notified municipalities;

4. Residential plot of 200 sq. yards and above din areas other than the notified municipalities;

ಮೇಲೆ ಓದಲಾದ ಕ್ರ.ಸಂ. (3)ರ ಆದೇಶದಲ್ಲಿ ಭಾರತ ಸರ್ಕಾರದ ನಾಗರೀಕ ಹುದ್ದೆಗಳು ಮತ್ತು ಸೇವೆಗಳಲ್ಲಿ ನೇರ ನೇಮಕಾತಿಯಲ್ಲಿ ಹಾಗೂ ಕೇಂದ್ರ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶಕ್ಕಾಗಿ ಆರ್ಥಿಕವಾಗಿ ದುರ್ಬಲ ವರ್ಗಗಳಿಗೆ ಮೀಸಲಾತಿ ಕಲ್ಪಿಸುವ ಸಂಬಂಧ ರಾಜ್ಯದ 144 ಜಾತಿಗಳಿಗೆ ಅನ್ವಯವಾಗುವಂತೆ ಆರ್ಥಿಕವಾಗಿ ದುರ್ಬಲ ವರ್ಗಗಳ (EWSs) ಮೀಸಲಾತಿ ಕಲ್ಪಿಸಿ ಸರ್ಕಾರದ ಆದೇಶವನ್ನು ಹೊರಡಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ. (4)ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರು ಕೇಂದ್ರ ಸರ್ಕಾರದ ನಾಗರೀಕ ಹುದ್ದೆಗಳು ಮತ್ತು ಸೇವೆಗಳಲ್ಲಿ ನೇರ ನೇಮಕಾತಿಯಲ್ಲಿ ಆರ್ಥಿಕವಾಗಿ ದುರ್ಬಲ ವರ್ಗಗಳಿಗೆ ಮೀಸಲಾತಿ ಕಲ್ಪಿಸುವ ಸಂಬಂಧ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 75 ಬಿಸಿಎ 2019, ದಿನಾಂಕ:14.05.2019 ರ ಆದೇಶದ ಅನುಬಂಧ-2ರಲ್ಲಿ ಸೇರ್ಪಡೆಯಾಗುವ ಜಾತಿಗಳಲ್ಲಿ ಕೇಂದ್ರ ಸರ್ಕಾರದ ಇತರೆ ಹಿಂದುಳಿದ ವರ್ಗಗಳ ಜಾತಿ ಪಟ್ಟಿಯಲ್ಲಿ ನಮೂದಾಗಿರುವ ಕೆಲವು ಜಾತಿಗಳು ಆರ್ಥಿಕ ದುರ್ಬಲ ವರ್ಗಗಳ ಮೀಸಲಾತಿಯಡಿಯಲ್ಲಿಯೂ ನಮೂದಾಗಿರುತ್ತವೆ. ಈ ಜಾತಿಗಳು ಎರಡು ಕಡೆಯೂ ಮೀಸಲಾತಿ ಪಡೆಯಲು ಅರ್ಹರಾಗಿರುತ್ತಾರೆ ಹಾಗೂ ಈ ಜಾತಿಗಳು ರಾಜ್ಯ ಸರ್ಕಾರ ಹೊರಡಿಸಿರುವ ಆರ್ಥಿಕ ದುರ್ಬಲ ವರ್ಗಗಳ ಮೀಸಲಾತಿ ಹಾಗೂ ಕೇಂದ್ರ ಸರ್ಕಾರದ ಇತರೆ ಹಿಂದುಳಿದ ವರ್ಗಗಳ ಮೀಸಲಾತಿಯನ್ನು ಸಹ ಪಡೆಯಬಹುದಾಗಿರುತ್ತದೆ. ಆದುದರಿಂದ ಸರ್ಕಾರದ ಆದೇಶ ಸಂಖ್ಯೆ: ಹಿಂವಕ 75 ಬಿಸಿಎ 2019, ದಿನಾಂಕ:14.05.2019ರ ಆದೇಶದ ಅನುಬಂಧ-2ನ್ನು ಹಿಂಪಡೆಯಬಹುದಾಗಿರುತ್ತದೆ ಹಾಗೂ ಕೇಂದ್ರ ಸರ್ಕಾರದ ಮಾದರಿಯಲ್ಲಿ "The persons belonging to EWSs who are not covered under the scheme of reservation for SCs, STs and OBCs shall get 10% reservation in direct recruitment in civil posts and services in the Government of India" ಎಂದು ಆದೇಶಿಸಲು ಕೋರಿರುತ್ತಾರೆ. ಹಾಗೂ ಕೇಂದ್ರ ಸರ್ಕಾರದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳ ಜಾತಿ ಪಟ್ಟಿಯಲ್ಲಿನ ಜಾತಿಗಳನ್ನು ಹೊರತುಪಡಿಸಿ ಉಳಿದ ಜಾತಿಗಳು ಆರ್ಥಿಕ ದುರ್ಬಲ ವರ್ಗಗಳ ಮೀಸಲಾತಿಯನ್ನು ಪಡೆಯಲು ಅರ್ಹರಿರುವುದಾಗಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಈ ಕುರಿತಂತೆ ಆದಾಯ ಮತ್ತು ಸ್ವತ್ತು ಪ್ರಮಾಣ ಪತ್ರವನ್ನು "ಅಟಲ್‌ಜೀ ಜನ ಸ್ನೇಹಿ ಕೇಂದ್ರಗಳಿಂದ" ವಿತರಿಸುವ ಪ್ರಾಧಿಕಾರವಾದ ಕಂದಾಯ ಇಲಾಖೆಯ ಸಹಮತಿಯನ್ನು ಕೋರಲಾಗಿದ್ದು, ಸದರಿ ಇಲಾಖೆಯು ಸಹಮತಿಯನ್ನು ನೀಡಿರುತ್ತದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ :ಹಿಂವಕ 75ಬಿಸಿಎ 2019, ಬೆಂಗಳೂರು,**
**ದಿನಾಂಕ : 31.07.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಭಾರತ ಸರ್ಕಾರದ ನಾಗರೀಕ ಹುದ್ದೆಗಳು, ಸೇವೆಗಳು ಮತ್ತು ಶಿಕ್ಷಣ ಸಂಸ್ಥೆಗಳಲ್ಲಿ ಆರ್ಥಿಕವಾಗಿ ದುರ್ಬಲ ವರ್ಗಗಳು (EWSs) ಮೀಸಲಾತಿ ಸೌಲಭ್ಯವನ್ನು ಪಡೆಯಲು ರಾಜ್ಯದ ಅರ್ಹ ಅಭ್ಯರ್ಥಿ / ವಿದ್ಯಾರ್ಥಿಗಳಿಗೆ ಭಾರತ ಸರ್ಕಾರದ ಸಿಬ್ಬಂದಿ, ಕುಂದುಕೊರತೆ ಮತ್ತು ಪಿಂಚಣಿ ಮಂತ್ರಾಲಯದ ಅಧಿಕೃತ ಜ್ಞಾಪನ ಸಂಖ್ಯೆ: F. No.36039/1/2019-Estt (Res.), ದಿನಾಂಕ:19.01.2019 ಮತ್ತು ದಿನಾಂಕ:31.01.2019 ರಲ್ಲಿರುವಂತೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಕೇಂದ್ರ ಸರ್ಕಾರದ ಇತರೆ ಹಿಂದುಳಿದ ವರ್ಗಗಳ (Central OBC) ಪಟ್ಟಿಗಳಲ್ಲಿ ಇರುವ ಜಾತಿಗಳನ್ನು ಹೊರತುಪಡಿಸಿ, ಉಳಿದ ಎಲ್ಲಾ ಜಾತಿಗಳ ಅರ್ಹ ಅಭ್ಯರ್ಥಿಗಳಿಗೆ, ರಾಜ್ಯ ಸರ್ಕಾರಕ್ಕೆ ಯಾವುದೇ ಆರ್ಥಿಕ ಹೊರೆ ಆಗದಂತೆ, ಅನುಬಂಧ-1 ರಲ್ಲಿನ **"ಆದಾಯ ಮತ್ತು ಸ್ವತ್ತುಗಳ ಪ್ರಮಾಣ ಪತ್ರ"** ಒದಗಿಸಲು ಅನುಮತಿ ನೀಡಿ ಆದೇಶಿಸಲಾಗಿದೆ.